Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.02.2026 18.40 hrs

*******************

ಮುಖ್ಯಾಂಶಗಳು

- ರಾಜ್ಯ ಬಜೆಟ್ ದಿನಾಂಕ ಶೀಘ್ರವೇ ಪ್ರಕಟ- ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಪರಿಶಿಷ್ಟ ಸಮುದಾಯದ ಭೂಹೀನ ಬಡವರಿಗೆ ನಿವೇಶನ ಒದಗಿಸಲು ಸರ್ಕಾರ ನಿರ್ಧಾರ
- ಬಂಡೀಪುರದಲ್ಲಿ ಬಿಗ್ ಕ್ಯಾಟ್ಸ್ ಶೃಂಗಸಭೆ; ಏಳು ದೊಡ್ಡ ಬೆಕ್ಕುಗಳ ರಕ್ಷಣೆಯ ನಿರ್ಣಯಕ್ಕೆ ೨೪ ದೇಶಗಳು ಸಹಿ
- ಜಿಬಿಎ ನಗರ ಪಾಲಿಕೆಗಳ ಚುನಾವಣೆಗೆ ಅಧಿಸೂಚಿತ ವಾರ್ಡ್ ಗಡಿಗಳ ಪಾಲನೆ ಕಡ್ಡಾಯ
- ರಣಜಿ ಟ್ರೋಫಿ: ಕ್ವಾರ್ಟರ್ ಫೈನಲ್‌ನಲ್ಲಿ ಮುಂಬೈ ಮಣಿಸಿ, ಸೆಮಿ ಫೈನಲ್ ಪ್ರವೇಶಿಸಿದ ಕರ್ನಾಟಕ

*******************

ರಾಜ್ಯದಲ್ಲಿ ಬುಡಕಟ್ಟು ವಿಶ್ವವಿದ್ಯಾನಿಲಯ ಸ್ಥಾಪಿಸಲು ಬೇಡಿಕೆ ಇದ್ದು, ಅದನ್ನು ಪರಿಶೀಲಿಸಿ, ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ದಾವಣಗೆರೆಯ ಹರಿಹರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಟ್ರೋ ದರ ಹೆಚ್ಚಳದಲ್ಲಿ ಸರ್ಕಾರ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯ ಬಜೆಟ್‌ಗೆ ಸಂಬಂಧಿಸಿದಂತೆ ತಯಾರಿ ನಡೆಯುತ್ತಿದ್ದು, ಬಜೆಟ್ ಮಂಡಿಸುವ ದಿನಾಂಕವನ್ನು ಶೀಘ್ರದಲ್ಲಿಯೇ ಪ್ರಕಟಿಸಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ, ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ರಾಜೀನಾಮೆ ವದಂತಿಯನ್ನು ಅವರು ತಳ್ಳಿಹಾಕಿದ್ದಾರೆ.

*******************

ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಭೂರಹಿತ ಬಡವರಿಗೆ ಸ್ವಂತ ನಿವೇಶನ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಹರಿಹರದ ರಾಜನಹಳ್ಳಿಯಲ್ಲಿಂದು ಮಾತನಾಡಿದ ಅವರು, ವಸತಿ ರಹಿತ ಬಡವರಿಗೆ ನಿವೇಶನ ನೀಡುವ ಉದ್ದೇಶದಿಂದ ಭೂಮಿ ಖರೀದಿಸಲು ಸರ್ಕಾರ ಈಗಾಗಲೇ ೪೦ ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡಿದೆ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯವರ ನಿವೇಶನಕ್ಕಾಗಿ ೨೦ ಕೋಟಿ ರೂಪಾಯಿ ಹಾಗೂ ಪರಿಶಿಷ್ಟ ಪಂಗಡದವರ ನಿವೇಶನಕ್ಕಾಗಿ ೨೦ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ.

ಖರೀದಿಸಿದ ಭೂಮಿಯಲ್ಲಿ ಸುಸಜ್ಜಿತ ಲೇಔಟ್‌ಗಳನ್ನು ನಿರ್ಮಿಸಿ, ಅರ್ಹ ಫಲಾನುಭವಿಗಳಿಗೆ ೩೦*೪೦ ಅಳತೆಯ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು. ಈ ವಸತಿ ಪ್ರದೇಶಗಳಿಗೆ 'ಅಂಬೇಡ್ಕರ್ ಕಾಲೋನಿ' ಅಥವಾ 'ವಾಲ್ಮೀಕಿ ಕಾಲೋನಿ' ಎಂದು ನಾಮಕರಣ ಮಾಡುವ ಚಿಂತನೆ ಇದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

********************

ಭಾರತ ಸರ್ಕಾರದ ತಾಂತ್ರಿಕ ಮತ್ತು ಆರ್ಥಿಕ ಸಹಕಾರ ಯೋಜನೆಯಡಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆಯು ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ನಡೆಯುತ್ತಿದೆ.

ಶೃಂಗಸಭೆ ಉದ್ಘಾಟಿಸಿ ಮಾತನಾಡಿದ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಮಹಾ ನಿರ್ದೇಶಕ ಡಾ.ಎಸ್.ಪಿ. ಯಾದವ್, ದೊಡ್ಡ ಬೆಕ್ಕುಗಳ ಸಂತತಿ ವೃದ್ಧಿ ಮತ್ತು ಸಂರಕ್ಷಣೆ ಮಾಡುವ ನಾಯಕತ್ವವನ್ನು ಭಾರತ ವಹಿಸಿಕೊಂಡಿದೆ. ಹುಲಿ, ಸಿಂಹ, ಚಿರತೆ, ಹಿಮ ಚಿರತೆ, ಕಪ್ಪು ಚಿರತೆ, ಪೂಮ, ಚೀತಾ ಎಂಬ ೭ ದೊಡ್ಡ ಬೆಕ್ಕಿನ ರಕ್ಷಣೆ ಮಾಡುವ ನಿರ್ಣಯಕ್ಕೆ ಭಾರತದೊಂದಿಗೆ ೨೪ ದೇಶಗಳು ಸಹಿ ಮಾಡಿವೆ ಎಂದು ತಿಳಿಸಿದ್ದಾರೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್ ಮಾತನಾಡಿ, ಶೃಂಗಸಭೆಯಲ್ಲಿ ಕಳೆದ ೫೦ ವರ್ಷಗಳಿಂದ ಹುಲಿ ಸಂರಕ್ಷಣೆಗೆ ಕೈಗೊಂಡ ಪರಿಣಾಮಕಾರಿ ಕ್ರಮಗಳು ಹಾಗೂ ಇತರೆ ದೇಶಗಳು ಅಳವಡಿಸಿಕೊಂಡಿರುವ ಕ್ರಮಗಳ ಕುರಿತು ಮಾಹಿತಿ ವಿನಿಮಯ ಆಗಲಿದೆ ಹೇಳಿದ್ದಾರೆ.

ಧ್ವನಿ: ಪ್ರಭಾಕರನ್, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ

ರಷ್ಯಾ, ಶ್ರೀಲಂಕಾ, ನೇಪಾಳ, ಕೀನ್ಯಾ, ಮಲೇಷ್ಯಾ, ಪೆರು, ನಮೀಬಿಯಾ, ಕಜಕಿಸ್ಥಾನ್ ಸೇರಿದಂತೆ ೨೩ ದೇಶಗಳಿಂದ ३೯ ಪ್ರತಿನಿಧಿಗಳು ಈ ಶೃಂಗಸಭೆಯಲ್ಲಿ ಭಾಗಿಯಾಗಿದ್ದಾರೆ.

********************

ರಾಜ್ಯದಲ್ಲಿ ಸರ್ಕಾರದಿಂದ ಮಂಜೂರಾದ ಭೂಮಿಗಳ ಸರ್ವೆ, ಪೋಡಿ, ಮತ್ತು ಆರ್‌ಟಿಸಿಗಳನ್ನು ಸಾರ್ವಜನಿಕರ ಮನೆ ಬಾಗಿಲಗೆ ತಲುಪಿಸುವ ಕಾರ್ಯ ಆರಂಭವಾಗಿದ್ದು, ಈವರೆಗೆ ೧ಲಕ್ಷದ ೪೦ ಸಾವಿರಕ್ಕೂ ಹೆಚ್ಚು ಪ್ರಕರಣಗಳನ್ನು ಕಂದಾಯ ಇಲಾಖೆ ಸ್ವೀಕರಿಸಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಮಾರು ೪೯ ಲಕ್ಷ ಅರ್ಜಿಗಳು ಬಂದಿದ್ದು, ಇವುಗಳಲ್ಲಿ ೧೨ ಲಕ್ಷ ಪ್ರಕರಣಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ: ಕೃಷ್ಣ ಬೈರೇಗೌಡ ಸಚಿವರು

********************

ಜಿಬಿಎ ವ್ಯಾಪ್ತಿಯ ೫ ನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಅಧಿಸೂಚನೆಯಲ್ಲಿ ನಮೂದಿಸಿರುವ ವಾರ್ಡ್ ಗಡಿಗಳ ಪಾಲನೆ ಕಡ್ಡಾಯ ಎಂದು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೫ ನಗರ ಪಾಲಿಕೆಗಳ ಕರಡು ನಗರ ಪಾಲಿಕೆ ಮತದಾರರ ಪಟ್ಟಿಯ ಪರಿಶೀಲನೆಗೆ ಸಂಬಂಧಿಸಿದ ಪ್ರಮಾಣಿತ ಕಾರ್ಯವಿಧಾನ ಕುರಿತು ಆಯೋಜಿಸಲಾದ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಗಡಿಗಳ ಸರ್ವೆ ಮೂಲಕ ಪರಿಶೀಲನೆ ಕೈಗೊಳ್ಳುವಂತೆ ಐಟಿ ವಿಭಾಗದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ವಿಭಜಿತ ವಾರ್ಡ್‌ಗಳಿಗೆ ಸಂಬಂಧಿಸಿದ ಮಾಹಿತಿಯ ನಿಖರತೆಯನ್ನು ನಗರ ಪಾಲಿಕೆ ಆಯುಕ್ತರು ಸ್ವತಂತ್ರವಾಗಿ ಪರಿಶೀಲಿಸಿ ದೃಢೀಕರಿಸುವಂತೆ ತಿಳಿಸಿದ್ದಾರೆ.

********************

ಕೆರೆಗಳ ನಗರವೆಂದು ಪ್ರಸಿದ್ಧವಾಗಿದ್ದ ಬೆಂಗಳೂರು ಮಹಾನಗರವೀಗ ಜಲಕ್ಷಾಮದ ಗಂಭೀರ ಸವಾಲನ್ನು ಎದುರಿಸುತ್ತಿದೆ. ಈ ಹಿನ್ನೆಲೆಯಲ್ಲಿ ಸಮರ್ಪಕ ಜಲ ನಿರ್ವಹಣೆಯತ್ತ ತುರ್ತು ಕ್ರಿಯಾ ಯೋಜನೆ ರೂಪಿಸಬೇಕಾದ ಅಗತ್ಯವಿದೆ ಎಂದು ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ರಮೇಶ್.ಬಿ. ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿಂದು ಜಲ, ಇಂಧನ, ಪರಿಸರ ಮತ್ತು ಆರೋಗ್ಯ ಸಂರಕ್ಷಣೆಯ ಕುರಿತಾದ "ವೀಹ್ ಟೆಕ್-೨೦೨೪" ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಭವಿಷ್ಯದ ಪೀಳಿಗೆಯ ಹಿತದೃಷ್ಟಿಯಿಂದ ಸುಸ್ಥಿರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ನೀರು ಕೇವಲ ಒಂದು ಸಂಪನ್ಮೂಲವಾಗಿರದೆ ಜೀವನ ಮತ್ತು ಜೀವನೋಪಾಯದ ಸಾಧನವೂ ಆಗಿದೆ ಎಂದು ಹೇಳಿದ್ದಾರೆ.

********************

ನಾಳೆ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ. ಹಾವೇರಿ ಜಿಲ್ಲಾದ್ಯಂತ ಒಂದರಿಂದ ೬ ವರ್ಷದ ಮಕ್ಕಳಿಗೆ ಅಂಗನವಾಡಿಗಳಲ್ಲಿ, ಆರರಿಂದ ೧೬ ವರ್ಷದ ಮಕ್ಕಳಿಗೆ ಶಾಲೆಗಳಲ್ಲಿ, ೧೬ ರಿಂದ ೧೯ ವರ್ಷದೊಳಗಿನ ಮಕ್ಕಳಿಗೆ ಕಾಲೇಜುಗಳಲ್ಲಿ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ಅಂಗನವಾಡಿಗಳಲ್ಲಿ ಮಾತ್ರೆಗಳನ್ನು ಉಚಿತವಾಗಿ ನೀಡಲಾಗುತ್ತದೆ ಎಂದು ಜಿಲ್ಲಾ ಮಕ್ಕಳ ಆರೋಗ್ಯ ಅಧಿಕಾರಿ ಡಾ.ಜಯಾನಂದ ತಿಳಿಸಿದ್ದಾರೆ.

ರಾಷ್ಟ್ರೀಯ ಜಂತುಹುಳು ನಿವಾರಣೆ ದಿನದ ಅಂಗವಾಗಿ ನಾಳೆ ವಿಜಯನಗರ ಜಿಲ್ಲೆಯಾದ್ಯಂತ ಎಲ್ಲಾ ಶಾಲೆ, ಕಾಲೇಜು ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಜಂತು ಹುಳು ನಿವಾರಣ ಮಾತ್ರೆಗಳನ್ನು ವಿತರಿಸುವ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಚಾಲನೆ ನೀಡಲಿದ್ದಾರೆ.

********************

ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಹಿನ್ನೆಲೆಯಲ್ಲಿ ಮಕ್ಕಳಿಗೆ ನೀರು ಕುಡಿಯುವಂತೆ ಜ್ಞಾಪಿಸಲು ಶಾಲೆಗಳಲ್ಲಿ 'ನೀರಿನ ಗಂಟೆ' ಬಾರಿಸುವುದನ್ನು ಕಡ್ಡಾಯಗೊಳಿಸಿ ಶಾಲಾ ಶಿಕ್ಷಣ ಇಲಾಖೆಯ 'ಪಿ.ಎಂ ಪೋಷಣೆ ಶಕ್ತಿ ನಿರ್ಮಾಣ್' ನಿರ್ದೇಶಕರು ಸುತ್ತೋಲೆ ಹೊರಡಿಸಿದ್ದಾರೆ.

ಕೊಪ್ಪಳ ಜಿಲ್ಲೆಯಲ್ಲಿ ಮೂರೂವರೆ ವರ್ಷಗಳ ಹಿಂದಿನಿಂದಲೇ ಚಾಲ್ತಿಯಲ್ಲಿರುವ ಯೋಜನೆ ಈಗ ರಾಜ್ಯದ ಎಲ್ಲ ಶಾಲೆಗಳಿಗೂ ವಿಸ್ತರಣೆಯಾಗಿದೆ.

ಗಂಗಾವತಿ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವಾಲ್ಮೀಕಿ ಆಶ್ರಮ ಶಾಲೆಯಲ್ಲಿ ಪ್ರತಿ ಗಂಟೆಗೆ 'ವಾಟರ್ ಬೆಲ್' ಪರಿಕಲ್ಪನೆ ಜಾರಿಯಾಗಿದೆ. ಈ ಶಾಲೆಯಲ್ಲಿ ಒಂದರಿಂದ ಐದನೇ ತರಗತಿವರೆಗೆ ಓದುವ ಮಕ್ಕಳಿಗೆ ವಾಟರ್ ಬಾಟಲ್‌ಗಳನ್ನು ನೀಡಲಾಗಿದ್ದು, ಸರಿಯಾಗಿ ತಾಸಿಗೆ ಒಂದು ಸಲ ಬೆಲ್ ಬಾರಿಸಲಾಗುತ್ತದೆ.

********************

ಚಿಕ್ಕಬಳ್ಳಾಪುರ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಕನಿಷ್ಠ ೧೦ಕ್ಕಿಂತ ಹೆಚ್ಚು ಮನೆ ಅಥವಾ ಜನವಸತಿ ಪ್ರದೇಶಗಳನ್ನು ಗುರುತಿಸಿ ಕಂದಾಯ ಗ್ರಾಮ ಅಥವಾ ಉಪ ಕಂದಾಯ ಗ್ರಾಮಗಳನ್ನಾಗಿಸುವ ಪ್ರಕ್ರಿಯೆಗಳು ಪ್ರಗತಿಯಲ್ಲಿದೆ. ಒಟ್ಟು ೩೦ ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

********************

ಕೋಲಾರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೇಸಿಗೆಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದರೆ.

********************

ಆಕಾಶವಾಣಿ ಮೈಸೂರು ಕೇಂದ್ರವು, ಇದೇ ೧೯ ರಂದು ಮೈಸೂರಿನಲ್ಲಿ ರೇಡಿಯೋ ಕಿಸಾನ್ ಸಂದರ್ಭದಲ್ಲಿ ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಬಳಕೆ ಹಾಗೂ ಕೃಷಿ ನವೋದ್ಯಮಗಳ ಕುರಿತ ಕಾರ್ಯಾಗಾರ ಆಯೋಜಿಸಿದೆ.

ಭಾರತೀಯ ಭಾಷಾ ಸಂಸ್ಥಾನದ ನಿರ್ದೇಶಕರಾದ ಪ್ರೊಫೆಸರ್ ಶೈಲೇಂದ್ರ ಮೋಹನ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

********************

ರಣಜಿ ಟ್ರೋಫಿ-೨೦೨೫-೨೬ ರ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮುಂಬೈ ತಂಡವನ್ನು ಮಣಿಸಿದ ಕರ್ನಾಟಕ ತಂಡ ಸೆಮಿ ಫೈನಲ್ ಪ್ರವೇಶಿಸಿದೆ.

ಮುಂಬೈ ನೀಡಿದ ೩೨೬ ರನ್‌ಗಳ ಗುರಿ ಬೆನ್ನತ್ತಿದ ಕರ್ನಾಟಕ, ೬ ವಿಕೆಟ್ ಗಳಿಂದ ಗೆಲುವು ಸಾಧಿಸಿದೆ.

ಕೆ.ಎಲ್.ರಾಹುಲ್ ೧೩೦ ಗಳಿಸಿ, ತುಷಾರ್ ಪಾಂಡೆಗೆ ವಿಕೆಟ್ ಒಪ್ಪಿಸಿದರು. ಮಧ್ಯಮ ಕ್ರಮಾಂಕದಲ್ಲಿ ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿದ್ದ ಕರ್ನಾಟ ತಂಡಕ್ಕೆ ಸ್ಮರಣ್ ರವಿಚಂದ್ರನ್ ಆಸರೆಯಾಗಿ ತಂಡವನ್ನು ಗೆಲುವಿನ ದಡಕ್ಕೆ ಮುಟ್ಟಿಸಿದರು.

**********ಮುಕ್ತಾಯ**********